ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ತೋಟಗಾರಿಕಾ ಬೆಳೆಗಳು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

208(233) ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೋಟಗಾರಿಕಾ ಬೆಳೆ ಕೃಷಿಯಲ್ಲಿರುವ ಒಟ್ಟು ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಮತ್ತು ಬೆಳೆವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆ ಸಮಯದಲ್ಲಿ ಕೊಯ್ಲು ಮೊದಲಿಗೆ ಮತ್ತು ಕೊಯ್ಲು ಸಂದರ್ಭದಲ್ಲಿ ನಾಶವಾದ ತೋಟಗಾರಿಕಾ ಬೆಳೆಯ ವಿಸ್ತೀರ್ಣವೆಷ್ಟು;

(ಇ) ಕೋವಿಡ್-19 ಪರಿಹಾರ ಪ್ಯಾಕೇಜ್ ಅಡಿಯಲ್ಲಿ ತೋಟಗಾರಿಕಾ ಬೆಳೆಗಾರರಿಗೆ ವಿವಿಧ ಬೆಳೆಗಳ ಬಾಬ್ತು ಒದಗಿಸಲಾದ ಪರಿಹಾರ ಎಷ್ಟು; (ಮಾಹಿತಿ ನೀಡುವುದು)

(ಈ) ಟಮ್ಯಾಟೊ, ಈರುಳ್ಳಿ ಮತ್ತು ಆಲೂಗಡ್ಡೆ ತರಕಾರಿಗಳು ಪದೇ ಪದೇ ಬೆಲೆಯು ಏರುಪೇರಾಗಿ ನಷ್ಟಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಉ) ರೈತರಿಗೆ ಸಂಭಾವನೆ ಹಾಗೂ ಗ್ರಾಹಕರಿಗೆ ಕೈಗೆಟುಕುವ ಬೆಲೆಯನ್ನು ಖಾತರಿಪಡಿಸುವ ಉದ್ದೇಶಗಳನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ ?